ಕರ್ನಾಟಕ ಸರ್ಕಾರ
ಆಯುಷ್ ಇಲಾಖೆ
ಧನ್ವಂತರಿ ರಸ್ತೆ, ಆನಂದರಾವ್ ವೃತ್ತದ ಹತ್ತಿರ, ಬೆಂಗಳೂರು-560 009
ಇ-ಮೇಲ್ : directorayush@gmail.com
ದೂರವಾಣಿ ಸಂ:080-22876553, ಫ್ಯಾಕ್ಸ್ : 080-22340139

ಸಂಖ್ಯೆ:ಆಯುಷ್/34/ಅಭಿವೃದ್ಧಿ(2)/2016-17 ದಿನಾಂಕ: 30-11-2016

**: ಸುತ್ತೋಲೆ :**

ವಿಷಯ:- ಪ್ರಥಮ ವರ್ಷದ ಆಯುಷ್ ಪದವಿ ಕೋರ್ಸ್‌ಗಳ ಪ್ರವೇಶ ಕುರಿತು.

ಉಲ್ಲೇಖ:- ಭಾರತ ಸರ್ಕಾರದ ಆಯುಷ್ ಮಂತ್ರಾಲಯ, ನವದೆಹಲಿ ಇವರ ಪತ್ರ ಸಂಖ್ಯೆ: R.11011/01/2016-EP(IM-1) ದಿನಾಂಕ:29-11-2016.

*******

ದಿನಾಂಕ:23-11-2016ರ ಸುತ್ತೋಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಗೊಂಡು ತಮ್ಮ ಸಂಸ್ಥೆಗಳಿಗೆ ಪ್ರವೇಶಾತಿಗೆ ಬರುವ ವಿದ್ಯಾರ್ಥಿಗಳಿಂದ ಸರ್ಕಾರ ನಿಗಧಿಪಡಿಸಿರುವ ಶುಲ್ಕವನ್ನು ಮಾತ್ರ ಪಡೆದು ನಿಗಧಿತ ದಿನಾಂಕದೊಳಗೆ ಪ್ರವೇಶಾತಿ ಮಾಡಿಕೊಳ್ಳಲು ಸೂಚಿಸಲಾಗಿತ್ತು.

ಭಾರತ ಸರ್ಕಾರದ ಆಯುಷ್ ಮಂತ್ರಾಲಯ, ನವದೆಹಲಿ ಇವರ ಪತ್ರ ದಿನಾಂಕ: 29-11-2016ರಲ್ಲಿ ಆಯುಷ್ ಪದವಿ ಕೋರ್ಸ್‌ಗಳ ಪ್ರವೇಶ ದಿನಾಂಕವನ್ನು 15-12-2016ರ ವರೆಗೆ ವಿಸ್ತರಿಸಿರುವುದರಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರಿಂದ ಸರ್ಕಾರಿ ಕೋಟಾದಡಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಪ್ರವೇಶಾವಕಾಶ ಕಲ್ಪಿಸಲು ಸೂಚಿಸಿದೆ. ಈ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿನಿಯಮದ ಕಂಡಿಕೆ(15)ರಲ್ಲಿ ಕೆಳಕಂಡಂತೆ ತಿಳಿಸಿರುತ್ತದೆ.

> **"A candidate is deemed to have been admitted to a professional college once the candidate has been allotted a seat by the CET cell"**

ಆದ್ದರಿಂದ ಯಾವುದೇ ಸಂದರ್ಭದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನಿರಾಕರಿಸುವಂತಿಲ್ಲ ಹಾಗೂ ಅಂತಹ ಸರ್ಕಾರಿ ಕೋಟಾ ಸೀಟುಗಳನ್ನು ಭರ್ತಿ ಮಾಡಿಕೊಳ್ಳುವಂತಿಲ್ಲ. ಯಾವುದೇ ಮಹಾವಿದ್ಯಾಲಯವು ಈ ನಿಯಮವನ್ನು ಉಲ್ಲಂಘಿಸಿದಲ್ಲಿ ನಿಯಮಾನುಸಾರ ನಿಮ್ಮ ಸಂಸ್ಥೆಯ ವಿರುದ್ಧ ಶಿಸ್ತು ಕ್ರಮವನ್ನು ಜರುಗಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು

ನಿರ್ದೇಶಕರು
ನಿರ್ದೇಶಕರು
ಆಯುಷ್ ನಿರ್ದೇಶನಾಲಯ
ಧನ್ವಂತರಿ ರಸ್ತೆ, ಬೆಂಗ...-09

ಗೆ,
ಪ್ರಾಚಾರ್ಯರು / ಆಡಳಿತ ಮಂಡಳಿಯವರು,
ರಾಜ್ಯದ ಎಲ್ಲಾ ಆಯುಷ್ ವೈದ್ಯಕೀಯ ಮಹಾವಿದ್ಯಾಲಯಗಳು.

**ಪ್ರತಿಯನ್ನು ಗೌರವಪೂರ್ವಕವಾಗಿ ಈ ಕೆಳಕಂಡವರಿಗೆ ಸಲ್ಲಿಸಿದೆ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 012 - ಮುಂದಿನ ಕ್ರಮಕ್ಕಾಗಿ ಕೋರುತ್ತಾ.
3. ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 012 - ಮುಂದಿನ ಕ್ರಮಕ್ಕಾಗಿ ಕೋರುತ್ತಾ.
4. ಕಛೇರಿ / ಹೆಚ್ಚುವರಿ ಪ್ರತಿ.

*UG Admission*